## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 300 |
| ಉತ್ತರಿಸಬೇಕಾದ ದಿನಾಂಕ | : 29.01.2026 |
| ಸದಸ್ಯರ ಹೆಸರು | : ಶ್ರೀ ಪ್ರತಾಪ್ ಸಿಂಹ ನಾಯಕ್ ಕೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ಸಚಿವರು | : ಮಾನ್ಯ ಮುಖ್ಯಮಂತ್ರಿಯವರು |

| ಕ್ರಸ | ಪ್ರಶ್ನೆ | ಉತ್ತರ |
|---|---|---|
| ಅ) | ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ಕ್ರೀಡಾ ಹಾಸ್ಟೆಲ್‌ಗಳು ಕಾರ್ಯ ನಿರ್ವಹಿಸುತ್ತಿವೆ. | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿ ಪ್ರಸ್ತುತ ಒಂದು ಕ್ರೀಡಾ ವಸತಿ ನಿಲಯ ಕಾರ್ಯ ನಿರ್ವಹಿಸುತ್ತಿದೆ. |
| ಆ) | ಸದರಿ ಎಲ್ಲಾ ಕ್ರೀಡಾ ಹಾಸ್ಟೆಲ್‌ಗಳು ಸ್ವಂತ ಕಟ್ಟಡ ಹಾಗೂ ಅವುಗಳಲ್ಲಿ ಎಲ್ಲಾ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆಯೇ; | ದಕ್ಷಿಣ ಕನ್ನಡ ಜಿಲ್ಲಾ ಕ್ರೀಡಾ ವಸತಿ ನಿಲಯದಲ್ಲಿ ಬಾಲಕರು ಮತ್ತು ಬಾಲಕಿಯರಿಗೆ ಪ್ರತ್ಯೇಕ ಸ್ವಂತ ಕಟ್ಟಡಗಳು ಇವೆ ಹಾಗೂ ಸದರಿ ಕಟ್ಟಡಗಳಲ್ಲಿ ಅಗತ್ಯ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲಾಗಿದೆ. |
| ಇ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವೆಷ್ಟು ಹಾಗೂ ದಾಖಲಾಗಿರುವ ವಿದ್ಯಾರ್ಥಿಗಳ ಸಂಖ್ಯೆ ಎಷ್ಟು (ಪ್ರತಿ ಹಾಸ್ಟೆಲ್‌ನ ವಿವರ ಪ್ರತ್ಯೇಕವಾಗಿ ನೀಡುವುದು) | ದಕ್ಷಿಣ ಕನ್ನಡ ಜಿಲ್ಲೆಯ ಮಂಗಳೂರಿನಲ್ಲಿರುವ ಕ್ರೀಡಾ ವಸತಿ ನಿಲಯದಲ್ಲಿ ಗರಿಷ್ಠ 50 ಕ್ರೀಡಾಪಟುಗಳ ಪ್ರವೇಶಬಲ ನಿಗಧಿಪಡಿಸಲಾಗಿದೆ.<br><br>ಪ್ರಸ್ತುತ ಕ್ರೀಡಾ ವಸತಿ ನಿಲಯದಲ್ಲಿ ಅಥ್ಲೆಟಿಕ್ಸ್ ಕ್ರೀಡಾ ವಿಭಾಗದಲ್ಲಿ 18 ಬಾಲಕರು ಮತ್ತು 15 ಬಾಲಕಿಯರು ಸೇರಿದಂತೆ ಒಟ್ಟು 33 ಕ್ರೀಡಾಪಟುಗಳು ಪ್ರವೇಶ ಪಡೆದಿರುತ್ತಾರೆ. |
| ಈ) | ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ದಾಖಲಾಗಿರುವ ವಿದ್ಯಾರ್ಥಿಗಳಿಗೆ ದೊರೆಯುತ್ತಿರುವ ಸೌಲಭ್ಯಗಳು ಯಾವುವು; | ಕ್ರೀಡಾ ವಸತಿ ನಿಲಯದಲ್ಲಿ ಪ್ರವೇಶ ಪಡೆದಿರುವ ಕ್ರೀಡಾಪಟುಗಳಿಗೆ ಮೆನುಪಟ್ಟಿಯಂತೆ ಉಚಿತ ಊಟೋಪಹಾರ, ವಸತಿ, ನುರಿತ ತರಬೇತುದಾರರಿಂದ ವೈಜ್ಞಾನಿಕ ಕ್ರೀಡಾ ತರಬೇತಿ, ಕ್ರೀಡಾ ಸಮವಸ್ತ್ರ, ಕ್ರೀಡಾ ಶೂಸ್, ಕ್ರೀಡಾ ಸಾಮಗ್ರಿಗಳು ಹಾಗೂ ಅಗತ್ಯ ಮೂಲಸೌಲಭ್ಯಗಳನ್ನು ಒದಗಿಸಲಾಗುತ್ತಿದೆ. ಸದರಿ ಕ್ರೀಡಾಪಟುಗಳಿಗೆ ಜಿಲ್ಲೆ, ರಾಜ್ಯ ಮತ್ತು ರಾಷ್ಟ್ರ ಮಟ್ಟದ ವಿವಿಧ ಕ್ರೀಡಾಕೂಟಗಳಲ್ಲಿ ಭಾಗವಹಿಸಲು ಪ್ರಯಾಣ ಭತ್ಯೆ/ದಿನ ಭತ್ಯೆ ನೀಡಲಾಗುತ್ತಿದೆ. ರಾಷ್ಟ್ರ ಮಟ್ಟ ಮತ್ತು ಮೇಲ್ಪಟ್ಟ ಕ್ರೀಡಾಕೂಟಗಳಲ್ಲಿ ಭಾಗವಹಿಸಿದವರಿಗೆ ಹಾಗೂ ಪದಕ ವಿಜೇತರಿಗೆ ನಗದು ಪ್ರೋತ್ಸಾಹಧನ ನೀಡಲಾಗುತ್ತಿದೆ. |
| ಉ) | ಸರ್ಕಾರ 2026-27ನೇ ಸಾಲಿಗೆ ಸದರಿ ಕ್ರೀಡಾ ಹಾಸ್ಟೆಲ್‌ಗಳಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವನ್ನು ಬೇಡಿಕೆಗನುಗುಣವಾಗಿ ಮತ್ತಷ್ಟು ಹೆಚ್ಚಿಸಲು ಅಗತ್ಯ ಕ್ರಮ ವಹಿಸುವುದೇ? | 2026-27ನೇ ಸಾಲಿಗೆ ಸದರಿ ಕ್ರೀಡಾ ವಸತಿ ನಿಲಯದಲ್ಲಿ ಪ್ರಸ್ತುತ ಇರುವ ದಾಖಲಾತಿ ಸಾಮರ್ಥ್ಯವನ್ನು ಹೆಚ್ಚಿಸುವ ಬಗ್ಗೆ ಪ್ರವೇಶಾವಕಾಶಕ್ಕೆ ಬೇಡಿಕೆ ಆಧರಿಸಿ ನಿಯಮಾನುಸಾರ ಪರಿಗಣಿಸಲಾಗುವುದು. |

**ಸಂಖ್ಯೆ: ವೈಎಸ್‌ಡಿ-ಇಬಿಬಿ/15/2026**

(ಸಿದ್ದರಾಮಯ್ಯ)
ಮುಖ್ಯಮಂತ್ರಿ